**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

## ಸಿ.ಸಿ.ನಂ. 1133/2018

| | | |
|---|---|---|
| ಸಾಕ್ಷಿದಾರರ ಹೆಸರು | : | ರವಿಶಂಕರ್ ಬಿ ಎಸ್ |
| ತಂದೆಯ ಹೆಸರು | : | ಬಿ ಎಸ್ ಶ್ರೀಕಂಠಪ್ರಸನ್ನ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ಪೊಲೀಸ್ ನಿರೀಕ್ಷಕರು, ಲಕ್ಷ್ಮಿಪುರಂ ಪೊಲೀಸ್ ಠಾಣೆ, ಮೈಸೂರು |
| ವಾಸಸ್ಥಳ | : | ಮೈಸೂರು. |

**ಸಾಕ್ಷಿಯನ್ನು ದಿನಾಂಕಃ 17.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ. ಸ. ಅ. ರವರಿಂದಃ**

ನಾನು ದಿನಾಂಕ 06.05.2017 ರಿಂದ 11.06.2018 ರವರೆಗೆ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಉಪನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 10.05.2018 ರಂದು ಚಾಸಾ-8 ರವರಿಂದ ಕಡತ ಪಡೆದು ಪರಿಶೀಲಿಸಿ, ಸರ್ವೆ ನಂ.30/3 ರ ಪಹಣಿ ಪತ್ರಿಕೆ ಪಡೆದು ಆರೋಪಿಯ ವಿರುದ್ಧ ದೋಷಾರೋಪಣಾಪಟ್ಟಿ ಸಲ್ಲಿಸಿರುತ್ತೇನೆ. ಸಾಕ್ಷಿಯು ಪಹಣಿ ಪತ್ರಿಕೆಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು **ನಿಪಿ-7** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-7(ಎ)** ಎಂದು ಗುರುತಿಸಲಾಯಿತು.

**ಪಾಟೀಸವಾಲುಃ ಆರೋಪಿ ಪರ ಶ್ರೀ ಎಂ.ಸಿ.ಎಸ್, ವಕೀಲರಿಂದಃ**

ಆರೋಪಿಯ ವಿರುದ್ಧ ಯಾವುದೇ ಸಾಕ್ಷ್ಯಾಧಾರಗಳು ಇಲ್ಲದಿದ್ದರೂ ಸುಳ್ಳು ಪ್ರಕರಣಕ್ಕೆ ಪೂರಕವಾಗಿ ಸುಳ್ಳು ದೋಷಾರೋಪಣಾಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗು, ಈ ಪ್ರಕರಣಕ್ಕೂ ಯಾವುದೇ ಸಂಬಂಧವಿರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

ಸಹಿ/–

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**

**ನಂಜನಗೂಡು.**